ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

2019-20ನೇ ಸಾಲಿನ ಆಯವ್ಯಯದಲ್ಲಿ ಪ್ರವಾಸೋದ್ಯಮ ಇಲಾಖೆಗೆ ನೀಡಿರುವ ಅನುದಾನದ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

832 (1086) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2019-20ನೇ ಸಾಲಿನ ಆಯವ್ಯಯದಲ್ಲಿ ಪ್ರವಾಸೋದ್ಯಮ ಇಲಾಖೆಗೆ ನೀಡಿರುವ ಅನುದಾನ ಎಷ್ಟು ;

(ಆ) ಯಾವ ಯಾವ ಜಿಲ್ಲೆಗಳಿಗೆ ಎಷ್ಟು ಅನುದಾನ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಬಿಡುಗಡೆ ಮಾಡಿರುವ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಮಾಡಲಾಗಿದೆ ; ಪೂರ್ಣಗೊಂಡ ಕಾಮಗಾರಿಗಳ ಪಟ್ಟಿ ನೀಡುವುದು ಮತ್ತು ಆ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾದ ಅನುದಾನದ ಮೊತ್ತವೆಷ್ಟು ; ಪ್ರತ್ಯೇಕವಾಗಿ ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು ;

(ಈ) ಪೂರ್ಣವಾಗದೇ ಇರುವ ಕಾಮಗಾರಿಗಳ ಪಟ್ಟಿ ನೀಡುವುದು ಮತ್ತು ಆ ಕಾಮಗಾರಿಗಳಿಗೆ ಬಿಡುಗಡೆ ಮಾಡದೇ ಬಾಕಿಯಿರುವ ಅನುದಾನದ ಮೊತ್ತವೆಷ್ಟು ; ಹಾಗೂ ಕಾಮಗಾರಿಗಳು ಪೂರ್ಣವಾಗದೇ ವಿಳಂಬವಾಗಿರಲು ಕಾರಣಗಳೇನು ; ಪ್ರತ್ಯೇಕವಾಗಿ ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು ?